ವಿ-72- (21)

**ಶ್ರೀ ಅರುಣ ಶಹಾಪುರ ವಿಧಾನ ಪರಿಷತ್ತು ಸದಸ್ಯರು ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 21 ಕ್ಕೆ ಉತ್ತರ.**

ಸೂಚನೆ: ಸಮಾಜ ಕಲ್ಯಾಣ ಇಲಾಖೆಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ, ಡಿಸಿಆರ್‌ಜಿ, ಹೆಚ್ಚುವರಿ ವೇತನ ಬಡ್ತಿ ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸುವ ಪ್ರಸ್ತಾವನೆ ಕುರಿತು ಹಾಗೂ ಪ್ರಸ್ತುತ ಸ್ಥಿತಿಗತಿಯ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ : ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆ ನೀಡುವ ಸಂಬಂಧ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಪತ್ರ ವ್ಯವಹರಿಸಲಾಗಿದ್ದು, ಸದರಿಯವರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರ ಅಭಿಪ್ರಾಯ ಕೋರಿರುತ್ತಾರೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮುಖಾಂತರ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರರೊಂದಿಗೆ ಸಮಾಲೋಚಿಸಿ ಸದರಿ ಸೌಲಭ್ಯವನ್ನು ವಿಸ್ತರಿಸುವ ಸಂಬಂಧ ಅಗತ್ಯ ಕ್ರಮವಹಿಸುವಂತೆ ಸೂಚಿಸಿರುತ್ತಾರೆ. ಅದರಂತೆ ಕ್ರಮವಹಿಸಲಾಗುತ್ತಿದೆ.

ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಮರಣ ಉಪದಾನ (DCRG) ಸೌಲಭ್ಯ ವಿಸ್ತರಿಸುವ ಪ್ರಸ್ತಾವನೆ ಪ್ರಸ್ತುತ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

ಶ್ರೀ ಕುಮಾರ್ ನಾಯಕ್, ಐ.ಎ.ಎಸ್ ರವರ ವರದಿಯಂತೆ, ಹೆಚ್ಚುವರಿ ವೇತನ ಬಡ್ತಿ ನೀಡುವ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆಯು ತಿಳಿಸಿದೆ.

ಮುಂದುವರೆದು, ಸಂಘದ ವ್ಯಾಪ್ತಿಯ ಖಾಯಂ ನೌಕರರುಗಳಿಗೆ ಇತರೆ ಸರ್ಕಾರಿ ನೌಕರರುಗಳಿಗೆ ನೀಡುತ್ತಿರುವಂತೆ ವೈದ್ಯಕೀಯ ವೆಚ್ಚ ಮರುಪಾವತಿ., ಕಾಲಕಾಲಕ್ಕೆ ಸರ್ಕಾರದಿಂದ ನಿಗಧಿಪಡಿಸಿದ ವೇತನ ಶ್ರೇಣಿಯಂತೆ ವೇತನ ಶ್ರೇಣಿ, ಗಳಿಕೆ ರಜೆ ನಗದೀಕರಣ ಸೌಲಭ್ಯ, ಮೃತಪಟ್ಟ ಖಾಯಂ ನೌಕರರ ಕುಟುಂಬದ ಸದ್ಯಸ್ಯರಿಗೆ ಅನುಕಂಪ ಆಧಾರದ ಮೇಲೆ ನಿಯಮಾನುಸಾರ ನೌಕರಿ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿರುತ್ತದೆ.

(ಬಿ.ಶ್ರೀರಾಮುಲು)
**ಸಮಾಜ ಕಲ್ಯಾಣ ಇಲಾಖಾ ಸಚಿವರು.**

**ಕಡತ ಸಂಖ್ಯೆ: ಸಕಇ 395 ಮೊದೇಶಾ 2020**